ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ     ದಿನಾಂಕ : DATE : 17/10/2019

# ರಾಜ್ಯಸಭೆಗೆ ರಾಮಮೂರ್ತಿ ರಾಜೀನಾಮೆ

ಪ್ರಜಾವಾಣಿ ವಾರ್ತೆ 17-10-19

ನವದೆಹಲಿ: ರಾಜ್ಯಸಭೆಯ ಕಾಂಗ್ರೆಸ್ ಸದಸ್ಯ, ನಿವೃತ್ತ ಐಪಿಎಸ್ ಅಧಿಕಾರಿ ಕೆ.ಸಿ. ರಾಮಮೂರ್ತಿ ಬುಧವಾರ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ಇತ್ತೀಚೆಗೆ ಕೇಂದ್ರದ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ಚರ್ಚಿಸಿದ್ದ ಇವರು, ಬಿಜೆಪಿ ಸೇರುವ ಸಾಧ್ಯತೆ ಇದೆ. 2016ರ ಜುಲೈನಲ್ಲಿ ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಗೆ ಆಯ್ಕೆಯಾಗಿದ್ದ ಇವರ ಸದಸ್ಯತ್ವದ ಅವಧಿ 2022ರ ಜೂನ್‌ವರೆಗೆ ಇತ್ತು. ತೆರವಾದ ಸ್ಥಾನದ ಮಿಕ್ಕ ಅವಧಿಗಾಗಿ ನಡೆಯಲಿರುವ ಉಪ ಚುನಾವಣೆಯಲ್ಲಿ ಬಿಜೆಪಿಯಿಂದ ಕಣಕ್ಕಿಳಿಯಲಿದ್ದಾರೆ ಎಂದು ಹೇಳಲಾಗಿದೆ.

'ಉಪರಾಷ್ಟ್ರಪತಿ ಎಂ.ವೆಂಕಯ್ಯ ನಾಯ್ಡು ಅವರಿಗೆ ರಾಜೀನಾಮೆ ನೀಡಿದ್ದು, ಕಾಂಗ್ರೆಸ್‌ನ ಪ್ರಾಥಮಿಕ ಸದಸ್ಯತ್ವವನ್ನೂ ತ್ಯಜಿಸಿದ್ದೇನೆ. ಆಮಿಷ, ಬೆದರಿಕೆಗೆ ಒಳಗಾಗಿ ಈ ತೀರ್ಮಾನ ಕೈಗೊಂಡಿಲ್ಲ' ಎಂದು ತಿಳಿಸಿದರು.

'ಪಕ್ಷದಲ್ಲಿನ ಆಂತರಿಕ ಸಮಸ್ಯೆಗಳ ನಿವಾರಣೆ ಕುರಿತು ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ, ಮತ್ತಿತರ ಮುಖಂಡರೊಂದಿಗೆ ಚರ್ಚಿಸಿದ್ದೆ. ಯಾರೂ ಗಂಭೀರವಾಗಿ ಪರಿಗಣಿಸದ್ದರಿಂದ ಪಕ್ಷ ತೊರೆಯುವ ನಿರ್ಧಾರ ಕೈಗೊಂಡಿದ್ದು, ಮುಂದಿನ ನಡೆಯ ಬಗ್ಗೆ ಎರಡು ದಿನಗಳ ನಂತರ ತಿಳಿಸುವೆ' ಎಂದು ಅವರು ಹೇಳಿದರು.

## ರಾಜೀನಾಮೆ ಕೊಟ್ಟ 3ನೇ ಕಾಂಗ್ರೆಸ್ಸಿಗ

ಮೂರು ತಿಂಗಳ ಅವಧಿಯಲ್ಲಿ ರಾಮಮೂರ್ತಿ ಸೇರಿದಂತೆ ಮೂವರು ಕಾಂಗ್ರೆಸ್ ಸದಸ್ಯರು ಸಂಸತ್ತಿನ ಮೇಲ್ಮನೆಯ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಇದೀಗ ರಾಜ್ಯಸಭೆಯಲ್ಲಿ ಕಾಂಗ್ರೆಸ್ ಸದಸ್ಯರ ಸಂಖ್ಯೆ 45ಕ್ಕೆ ಕುಸಿದಿದೆ. ರಾಜ್ಯಸಭೆಯಲ್ಲಿ ಬಹುಮತದ ಕೊರತೆ ಎದುರಿಸುತ್ತಿರುವ ಬಿಜೆಪಿ ಇತ್ತೀಚಿನ ದಿನಗಳಲ್ಲಿ ರಾಷ್ಟ್ರ ಮಟ್ಟದಲ್ಲೂ ಆಪರೇಷನ್ ಕಮಲಕ್ಕೆ ಕೈಹಾಕಿದೆ. 245 ಸದಸ್ಯ ಬಲದ ರಾಜ್ಯಸಭೆಯ ಐದು ಸ್ಥಾನಗಳು ಖಾಲಿ ಇದ್ದು, 111 ಸ್ಥಾನ ಹೊಂದಿರುವ ಬಿಜೆಪಿ ನೇತೃತ್ವದ ಆಡಳಿತಾರೂಢ ಎನ್‌ಡಿಎ ಬಹುಮತ ಗಳಿಸಲು 12 ಸ್ಥಾನಗಳ ಅಗತ್ಯವಿದೆ.

6